ಸಕಲೇಶಪುರ ಮತ್ತು ಆಲೂರು ತಾಲ್ಲೂಕುಗಳಲ್ಲಿ ಆನೆಗಳ ಹಾವಳಿ

329 (666) ಶ್ರೀ ಕುಮಾರಸ್ವಾಮಿ ಹೆಚ್.ಕೆ. (ಸಕಲೇಶಪುರ): ಮಾನ್ಯ ಅರಣ್ಯ ಮತ್ತು ಸಣ್ಣ ಕೈಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಹಾಸನ ಜಿಲ್ಲೆ ಸಕಲೇಶಪುರ ಮತ್ತು ಆಲೂರು ತಾಲ್ಲೂಕುಗಳಲ್ಲಿ ಇತ್ತೀಚೆಗೆ ಕಾಡಾನೆ ಹಾವಳಿ ಹೆಚ್ಚಿರುವುದು ನಿಜವೇ;

ಆ) ಆನೆಗಳ ಹಾವಳಿಯಿಂದ ರೈತರ ಆಸ್ತಿಪಾಸ್ತಿ ಪ್ರಾಣ ಹಾನಿ ಸಂಭವಿಸುತ್ತಿರುವುದು ನಿಜವೇ;

ಇ) ಕಳೆದ ಮೂರು ವರ್ಷಗಳಲ್ಲಿ ಆನೆ ದಾಳಿಯಿಂದ ಎಷ್ಟು ಜನ ಸಾವನ್ನಪ್ಪಿದ್ದಾರೆ ಹಾಗೂ ಸಾವನ್ನಪ್ಪಿರುವ ಆನೆಗಳ ಸಂಖ್ಯೆ ಎಷ್ಟು;

ಈ) ಆನೆಗಳಿಂದ ಜನರಿಗೆ ರಕ್ಷಣೆ ನೀಡಲು ಮತ್ತು ಆನೆಗಳನ್ನು ಸಂರಕ್ಷಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಸಿ.ಹೆಚ್. ವಿಜಯಶಂಕರ್ (ಅರಣ್ಯ ಮತ್ತು ಸಣ್ಣ ಕೈಗಾರಿಕೆ ಸಚಿವರು):

ಅ) ಹೌದು.

ಆ) ಹೌದು. ಗಮನಕ್ಕೆ ಬಂದಿದೆ.

ಇ) ಕಳೆದ ಮೂರು ವರ್ಷಗಳಲ್ಲಿ ಹಾಗೂ ಪ್ರಸ್ತುತ ವರ್ಷದಲ್ಲಿ ಆನೆ ದಾಳಿಯಿಂದ ಉಂಟಾದ ಮಾನವ ಹಾನಿ ಹಾಗೂ ಆನೆಗಳ ಸಾವಿನ ವಿವರಗಳು ಕೆಳಕಂಡಂತಿದೆ.

ವಿವರ	2007–08	2008–09	2009–10	2010–11 (ಜನವರಿ 2011ರ ವರೆಗೆ)
ಆನೆಗಳಿಂದಾದ ಪ್ರಾಣಹಾನಿ	03	04	03	01
ಆನೆಗಳ ಸಾವು	05	03	03	03

ಈ) ಈ ಜಿಲ್ಲೆಯಲ್ಲಿ ಸುಮಾರು 25–30 ಕಾಡಾನೆಗಳು ಸಂಚರಿಸುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿದ್ದು, ಕಾಡಾನೆಗಳು ಅರಣ್ಯ ಪ್ರದೇಶದಿಂದ ಪಕ್ಕದ ಕೃಷಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ದಾಳಿ ಮಾಡುವುದನ್ನು ತಡೆಗಟ್ಟುವ ಸಲುವಾಗಿ ಆನೆ ಸಂಚರಿಸುವಂತಹ ಸೂಕ್ಷ್ಮ ಪ್ರದೇಶಗಳ ಅರಣ್ಯದಂಚಿನಲ್ಲಿ

ಸುಮಾರು 3 ಕಿ.ಮೀ. ಕಾಡಾನೆ ನಿರೋಧಕ ಕಂದಕಗಳನ್ನು ನಿರ್ಮಿಸಿ, ಕಾಡಾನೆಗಳ ಹಾವಳಿ ಇರುವ ಸ್ಥಳಗಳಲಿ ಸೌರಶಕ್ತಿ ಬೇಲಿ ನಿರ್ಮಾಣ ಮಾಡಿ ಕಾಡಾನೆ ಹಾವಳಿಯನ್ನು ನಿಯಂತ್ರಿಸಲಾಗಿದೆ.

ದಾಳಿ ಮಾಡುವ ಸೂಕ್ಷ್ಮ ಪ್ರದೇಶಗಳನ್ನು ಗುರುತಿಸಿ ಹಾವಳಿ ಮಾಡುವ ಕಾಡಾನೆಗಳನ್ನು ಕಾಡಿಗೆ ಹಿಮ್ಮೆಟ್ಟಿಸುವ 14 ಶಿಬಿರಗಳನ್ನು ಸ್ಥಾಪಿಸಿ, ಕಾರ್ಯಾಚರಣೆ ಕ್ರಮ ಕೈಗೊಳ್ಳಲಾಗುತ್ತಿದೆ.

ಆನೆಗಳನ್ನು ಹಿಮ್ಮೆಟ್ಟಿಸುವ ಕಾರ್ಯಾಚರಣೆಗಾಗಿ ವಾಕಿ–ಟಾಕಿ, ವಾಹನ ಸೌಲಭ್ಯ, ಪಟಾಕಿ–ಸಿಡಿಮದ್ದು ಇತರೆ ಸಾಮಗ್ರಿಗಳನ್ನು ಒದಗಿಸಿದ್ದು, ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.

ಸಕಲೇಶಪುರ ಮತ್ತು ಆಲೂರು ತಾಲ್ಲೂಕುಗಳಲ್ಲಿ ಮಾನವ ಹತ್ಯೆ ಮಾಡುವಂತಹ ಪುಂಡಾನೆಗಳನ್ನು ಗುರುತಿಸಿ, 2005–06ರಲ್ಲಿ 02, 2006–07ರಲ್ಲಿ 01, 2007–08ರಲ್ಲಿ 03, 2009–10ರಲ್ಲಿ 02 ಹಾಗೂ 2010–11ರಲ್ಲಿ 03 ಪುಂಡಾನೆಗಳನ್ನು ಸೆರೆಹಿಡಿದು ಸ್ಥಳಾಂತರಿಸಲಾಗಿದೆ. ಹೀಗೆ ಸ್ಥಳೀಯರ ಸಹಕಾರದೊಂದಿಗೆ, ಇಲಾಖೆ ಮುಂಚೂಣಿ ಸಿಬ್ಬಂದಿ ಹಾಗೂ ಹಿರಿಯ ಅಧಿಕಾರಿಗಳೆಲ್ಲರೂ ಒಳಗೊಂಡಂತೆ ಸ್ಥಳದಲ್ಲಿ ಮೊಕ್ಕಾಂ ಮಾಡಿ, ತುರ್ತು ಅಗತ್ಯ ಕ್ರಮಗಳನ್ನು ಸಕಾಲದಲ್ಲಿ ಕೈಗೊಂಡು ಆನೆ ಹಾವಳಿ ತಡೆಯುವ ಕಾರ್ಯ ಕೈಗೊಳ್ಳಲಾಗುತ್ತಿದೆ.

ಉ) ಹೌದು.

ಬೆಳೆಹಾನಿ ಕಾಮಗಾರಿ

330 (667) ಶ್ರೀ ಕುಮಾರಸ್ವಾಮಿ ಹೆಚ್.ಕೆ. (ಸಕಲೇಶಪುರ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2008–09, 2009–10 ಮತ್ತು 2010–11ನೇ ಸಾಲುಗಳಲ್ಲಿ ಹಾಸನ ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ಉಂಟಾದ ಬೆಳೆ ಹಾನಿ ಸಾರ್ವಜನಿಕ ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನವೆಷ್ಟು; (ಕ್ಷೇತ್ರವಾರು ಅನುದಾನವನ್ನು ಬಿಡುಗಡೆ ಮಾಡುತ್ತಿರುವ ಮಾಹಿತಿ ನೀಡುವುದು);

ಆ) ಅನುದಾನ ಬಿಡುಗಡೆ ಮಾಡಲು ಪಾಲಿಸುವ ನಿಯಮಗಳೇನು; (ಮಾಹಿತಿ ನೀಡುವುದು)?

ಶ್ರೀ ಕರುಣಾಕರ ರೆಡ್ಡಿ (ಕಂದಾಯ ಸಚಿವರು):

ಅ) ಈ ಕೆಳಕಂಡಂತೆ ಅನುದಾನವನ್ನು ಸಾರ್ವಜನಿಕ ಕಾಮಗಾರಿಗಳಿಗೆ ಬಿಡುಗಡೆ ಮಾಡಿದೆ.